# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2021-22ನೇ ಸಾಲಿನಲ್ಲಿ, ಪಿಪಿಪಿ ಮಾದರಿಯ ಯೋಜನೆಗಳ ಬಗ್ಗೆ ವಿವಿಧ ಇಲಾಖೆ / ಸಂಸ್ಥೆಗಳ ಅಧಿಕಾರಿಗಳ ಸಾಮರ್ಥ್ಯ ಬಲವರ್ಧನೆಗಾಗಿ ತರಬೇತಿ ಕಾರ್ಯಕ್ರಮಗಳನ್ನು ಏರ್ಪಡಿಸಲು ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇವರಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಆಡಳಿತ ತರಬೇತಿ ಸಂಸ್ಥೆಯ ಪತ್ರ ಸಂಖ್ಯೆ: ATI-TRAN/23/2021-ATI-TRNG-ATI, ದಿನಾಂಕ 06.08.2021.
2. ಆಡಳಿತ ತರಬೇತಿ ಸಂಸ್ಥೆಯ ಪತ್ರ ಸಂಖ್ಯೆ: ಆ.ತ.ಸಂ/72/ಟಿ.ಆರ್.ಎ.ಎನ್/2020, ದಿನಾಂಕ 09.08.2021 ಮತ್ತು 13.12.2021.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರಗಳಲ್ಲಿ ಮೈಸೂರು ಆಡಳಿತ ತರಬೇತಿ ಸಂಸ್ಥೆಯು, ಸರ್ಕಾರದ ವಿವಿಧ ಇಲಾಖೆ / ಸಂಸ್ಥೆಗಳ ಅಧಿಕಾರಿಗಳಿಗೆ ಮೂಲಸೌಲಭ್ಯ ಯೋಜನೆಗಳನ್ನು ಪಿಪಿಪಿ ಆಧಾರದ ಮೇಲೆ ಅನುಷ್ಠಾನಗೊಳಿಸಲು ಸಾಮರ್ಥ್ಯ ಬಲವರ್ಧನೆ ಪಡಿಸಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸಂಸ್ಥೆಯು 2021-22ನೇ ಸಾಲಿನಲ್ಲಿ ಮೂರು ದಿನಗಳ 15 ತರಬೇತಿ ಕಾರ್ಯಕ್ರಮಗಳನ್ನು ಮತ್ತು ಎರಡು ದಿನಗಳ 27 ಕಾರ್ಯಾಗಾರಗಳನ್ನು ಏರ್ಪಡಿಸಲು, ಹೊರಗುತ್ತಿಗೆ ಆಧಾರದಲ್ಲಿ ಸಲಹೆಗಾರರ ವೇತನ, ಇತ್ಯಾದಿ ಖರ್ಚುಗಳಿಗಾಗಿ ಒಟ್ಟು ವೆಚ್ಚ ರೂ.40,08,400/- ಅವಶ್ಯವಿರುತ್ತದೆಯೆಂದು ಅಂದಾಜಿಸಿದ್ದು, ಈ ಪೈಕಿ 2019-20 ಸಾಲಿನಲ್ಲಿ ನೀಡಿದ ಅನುದಾನದಲ್ಲಿ 2020-21ನೇ ಸಾಲಿಗೂ ಉಪಯೋಗಿಸಿಕೊಂಡು ಇನ್ನೂ ರೂ.12,67,463/- ಗಳು ಉಳಿತಾಯವಾಗಿದೆ ಎಂದು ತಿಳಿಸಿರುತ್ತಾರೆ. 2021-22 ಸಾಲಿಗೆ ತಗಲುವ ಒಟ್ಟು ವೆಚ್ಚ ರೂ.40,08,400/- ರಲ್ಲಿ ಹಿಂದಿನ ಸಾಲಿನ ಉಳಿಕೆ ಮೊತ್ತ ಕಳೆದು ಬಾಕಿ ಮೊತ್ತ ರೂ.27,40,937/- ಗಳು ಅವಶ್ಯವಿರುತ್ತದೆ ಎಂದು ತಿಳಿಸಲಾಗಿದೆ. ಈ ಪೈಕಿ ರೂ.25,00,000/- ಅನುದಾನವನ್ನು ಬಿಡುಗಡೆ ಮಾಡಲು ನಿರ್ಣಯಿಸಲಾಗಿದೆ.

2. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಐಡಿಡಿ 54 ಐಟಿಎಸ್ 2020,**
**ಬೆಂಗಳೂರು, ದಿನಾಂಕ: 18.12.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇವರಿಗೆ 2021-22ನೇ ಸಾಲಿನಲ್ಲಿ ಸರ್ಕಾರದ ಇಲಾಖೆ / ಸಂಸ್ಥೆಗಳ ಅಧಿಕಾರಿಗಳಿಗೆ ಪಿಪಿಪಿ ವಿಷಯಗಳಲ್ಲಿ ಸಾಮರ್ಥ್ಯ ಬಲವರ್ಧನೆಗಾಗಿ ತರಬೇತಿ ಕಾರ್ಯಕ್ರಮಗಳನ್ನು, ಕಾರ್ಯಗಾರಗಳನ್ನು ಏರ್ಪಡಿಸಲು ಹಾಗೂ ಹೊರಗುತ್ತಿಗೆ ಆಧಾರದಲ್ಲಿ ಸಲಹೆಗಾರರ ನೇಮಕ, ಇತ್ಯಾದಿ ಖರ್ಚುಗಳಿಗಾಗಿ ರೂ.25,00,000/- (ರೂಪಾಯಿ ಇಪ್ಪತ್ತೈದು ಲಕ್ಷಗಳು ಮಾತ್ರ) ಗಳನ್ನು ನೀಡಲು ಸರ್ಕಾರದ ಮಂಜೂರಾತಿಯನ್ನು ನೀಡಿದೆ.

2. ಸದರಿ ವೆಚ್ಚವನ್ನು 2021-22ನೇ ಸಾಲಿನ ಲೆಕ್ಕ ಶೀರ್ಷಿಕೆ 3451-00-090-1-06-059-ಪಿಪಿಪಿ ಅಭಿವೃದ್ಧಿ ಕಾರ್ಯಕ್ರಮಗಳು – ಇತರೆ ಖರ್ಚುಗಳು ಅಡಿಯಲ್ಲಿ ಲಭ್ಯವಿರುವ ರೂ.67 ಲಕ್ಷಗಳಿಂದ ಭರಿಸತಕ್ಕದ್ದು.

3. ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇವರು ಹಣ ಸ್ವೀಕೃತಿ ರಸೀದಿಯ ಮೇಲೆ ಸರ್ಕಾರದ ಅಧೀನ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ ಇವರ ಮೇಲು ಸಹಿ ಪಡೆದು ರಾಜ್ಯ ಹುಜೂರ್ ಖಜಾನೆ, ಬೆಂಗಳೂರು ಇವರಿಂದ ಪಡೆಯಲು ಅನುಮತಿ ನೀಡಲಾಗಿದೆ. ಸದರಿ ಚೆಕ್ / ಡಿಡಿಯನ್ನು "ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು" ರವರ ಹೆಸರಿಗೆ ನೀಡುವುದು.

4. ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಆಇ 01 ಟಿಎಫ್‌ಪಿ 2021, ದಿನಾಂಕ 05.04.2021 ರಡಿಯಲ್ಲಿ ನೀಡಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕಲಾವತಿ ಎಸ್.ಎನ್.)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮೂಲಸೌಲಭ್ಯ ಅಭಿವೃದ್ಧಿ, ಬಂದರು
ಮತ್ತು ಒಳನಾಡು ಜಲಸಾರಿಗೆ ಇಲಾಖೆ.

ಗೆ,

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಆ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4. ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
5. ಹಿರಿಯ ನಿರ್ದೇಶಕರು, (ಪಿಎಮ್ & ಐ ವಿಭಾಗ), ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಯೋಜನಾ ನಿರ್ದೇಶಕರು, ಖಜಾನೆ-2, ಕೆ.ಪಿ.ಸಿ.ಎಲ್. ಆವರಣ, ಶಕ್ತಿ ಭವನ ಕಟ್ಟಡ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎನ್.ಎಮ್.ಸಿ, ಖನಿಜ ಭವನ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-1), ವಿಧಾನಸೌಧ, ಬೆಂಗಳೂರು.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ-1, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ.